All India Radio: Bangalore
Regional Bulletin In Kannada
16.09.2025 07.35 a.m.
ಆಕಾಶವಾಣಿ, ಬೆಂಗಳೂರು
ಪ್ರದೇಶ ಸಮಾಚಾರ
16.09.2025 07.35p.m.

ಮುಖ್ಯಾಂಶಗಳು

೧. ಅಕ್ರಮ ಒಳನುಸುಳುವಿಕೆಯನ್ನು ತಡೆಗಟ್ಟಲು ಎನ್‌ಡಿಎ ಸರ್ಕಾರ ಬದ್ಧ - ಪ್ರಧಾನಿ ನರೇಂದ್ರ ಮೋದಿ

೨. ನವದೆಹಲಿಯಲ್ಲಿಂದು ಎರಡನೇ ಮಾದಕ ದ್ರವ್ಯ ವಿರೋಧಿ ಕಾರ್ಯಪಡೆ ರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಲಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ

೩. ರೈತರ, ವಿಜ್ಞಾನಿಗಳ ಪರಿಶ್ರಮ ಮತ್ತು ಸರ್ಕಾರದ ನೀತಿಗಳಿಂದ ದೇಶದ ಕೃಷಿಯಲ್ಲಿ ಬೆಳವಣಿಗೆ - ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್

೪. ಏಷ್ಯಾ ಕಪ್ ಕ್ರಿಕೆಟ್ - ಒಮಾನ್ ವಿರುದ್ಧ ಯುಎಇಗೆ ೪೨ ರನ್‌ಗಳ ಜಯ

><><><><><

ಬಿಹಾರ, ಪಶ್ಚಿಮ ಬಂಗಾಳ ಮತ್ತು ಅಸ್ಸಾಂ ಪ್ರದೇಶವನ್ನು ಅತಿಕ್ರಮವಾಗಿ ಒಳನುಸುಳುವವರಿಂದ ಮುಕ್ತಗೊಳಿಸಲು ಎನ್‌ಡಿಎ ಸರ್ಕಾರ ಬದ್ಧವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನಿನ್ನೆ ಬಿಹಾರದ ಪೂರ್ನಿಯಾದ ಶೀಶಾ ಬಾಡಿಯಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಸೀಮಾಂಚಲ್ ಮತ್ತು ಪೂರ್ವ ಭಾರತದಲ್ಲಿ ಅಕ್ರಮ ನುಸುಳುವಿಕೆಯಿಂದಾಗಿ ಉಂಟಾಗುತ್ತಿರುವ ಗಂಭೀರ ಜನಸಂಖ್ಯಾ ಬಿಕ್ಕಟ್ಟಿನ ಕುರಿತು ಬೆಳಕು ಚೆಲ್ಲಿದರು.

ನಿನ್ನೆ ಬಿಹಾರದಾದ್ಯಂತ ೪೦ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ಉದ್ಘಾಟನೆ ಮತ್ತು ಶಂಕು ಸ್ಥಾಪನೆ ನೆರವೇರಿಸಿದರು.

><><><><><

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ನವದೆಹಲಿಯಲ್ಲಿ ಮಾದಕ ದ್ರವ್ಯ ವಿರೋಧಿ ಕಾರ್ಯಪಡೆ ಎಎನ್‌ಟಿಎಫ್ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯಸ್ಥರ ಎರಡನೇ ರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ಮಾದಕ ದ್ರವ್ಯ ಮುಕ್ತ ಭಾರತಕ್ಕೆ ಪ್ರಧಾನಿ ನರೇಂದ್ರ ಮೋದಿಯವರ ಬದ್ಧತೆಯನ್ನು ಬಲಪಡಿಸಲು ಮತ್ತು ಈ ಗುರಿಯನ್ನು ಸಾಧಿಸಲು ಮಾರ್ಗಸೂಚಿಯನ್ನು ರೂಪಿಸಲು ಈ ಸಮ್ಮೇಳನ ಒಂದು ಕಾರ್ಯತಂತ್ರದ ವೇದಿಕೆಯಾಗಿ ಕಾರ್ಯನಿರ್ವಹಿಸಲಿದೆ. ಮಾದಕ ದ್ರವ್ಯ ನಾಶಪಡಿಸುವ ವಿಶೇಷ ಅಭಿಯಾನದ ಉದ್ಘಾಟನೆಯ ಅಂಗವಾಗಿ ಈ ಸಂದರ್ಭದಲ್ಲಿ ನಾಲ್ಕು ಸಾವಿರದ ೭೯೪ ಕೋಟಿ ರೂಪಾಯಿ ಮೌಲ್ಯದ ಮಾದಕ ದ್ರವ್ಯಗಳನ್ನು ನಾಶಪಡಿಸುವುದಾಗಿ ಗೃಹ ಸಚಿವರು ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ತಿಳಿಸಿದ್ದಾರೆ. ಏಕೀಕೃತ ಸಂಕಲ್ಪ, ಸಾಮೂಹಿಕ ಜವಾಬ್ದಾರಿ ಎಂಬುದು ಮಾದಕ ದ್ರವ್ಯ ನಿಯಂತ್ರಣ ಸಂಸ್ಥೆ ಆಯೋಜಿಸುತ್ತಿರುವ ಈ ಸಮ್ಮೇಳನದ ಧ್ಯೇಯವಾಕ್ಯವಾಗಿದೆ.

><><><><><

ರೈತರು ಮತ್ತು ವಿಜ್ಞಾನಿಗಳ ಕಠಿಣ ಪರಿಶ್ರಮ ಮತ್ತು ಸರ್ಕಾರದ ನೀತಿಗಳಿಂದಾಗಿ ದೇಶದಲ್ಲಿ ಕೃಷಿ ಶೇಕಡಾ ೩.೭ ರಷ್ಟು ಬೆಳವಣಿಗೆ ಕಾಣುತ್ತಿದ್ದು, ಇದು ವಿಶ್ವದಲ್ಲೇ ಅತ್ಯಧಿಕವಾಗಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ರಾಷ್ಟ್ರೀಯ ಕೃಷಿ ಸಮ್ಮೇಳನ - ರಾಬಿ ಅಭಿಯಾನ್ ೨೦೨೫ ಅನ್ನುದ್ದೇಶಿಸಿ ಮಾತನಾಡಿದ ಸಚಿವರು, ರಾಷ್ಟ್ರ ಮತ್ತು ರೈತರ ಕಲ್ಯಾಣಕ್ಕಾಗಿ ರಾಜ್ಯಗಳು ಮತ್ತು ಕೇಂದ್ರವು ಒಟ್ಟಾಗಿ ಕೆಲಸ ಮಾಡುವುದನ್ನು ಮುಂದುವರಿಸುತ್ತವೆ ಎಂದು ಹೇಳಿದರು.

ನಕಲಿ ರಸಗೊಬ್ಬರಗಳು, ಬೀಜಗಳು ಮತ್ತು ಕೀಟನಾಶಕಗಳಿಗೆ ಕಾರಣರಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ರೈತರಿಗೆ ಭರವಸೆ ನೀಡಿದರು. ಎಲ್ಲಾ ಮಾನದಂಡಗಳನ್ನು ಪೂರೈಸುವ ಸಸ್ಯ ಬೆಳವಣಿಗೆ ವರ್ಧಕಗಳು ಮಾತ್ರ ಈಗ ಮಾರಾಟಕ್ಕೆ ಅನುಮತಿಸಲಾಗುವುದು ಎಂದು ಅವರು ಹೇಳಿದರು. ಎರಡು ದಿನಗಳ ರಾಷ್ಟ್ರೀಯ ಕೃಷಿ ಸಮ್ಮೇಳನ - ರಬಿ ಅಭಿಯಾನ್ ೨೦೨೫ ಅನ್ನು 'ಒಂದು ರಾಷ್ಟ್ರ - ಒಂದು ಕೃಷಿ - ಒಂದು ತಂಡ' ಎಂಬ ವಿಷಯದ ಅಡಿಯಲ್ಲಿ ಆಯೋಜಿಸಲಾಗಿದೆ.

><><><><><

ಭಾರತ ಈಗ ಅಂತರರಾಷ್ಟ್ರೀಯ ಕಾನೂನು ಮಾಪನಶಾಸ್ತ್ರ ಸಂಸ್ಥೆ - ಒಐಎಂಎಲ್ ಮಾದರಿ ಅನುಮೋದನೆ ಪ್ರಮಾಣಪತ್ರವನ್ನು ನೀಡುವ ವಿಶ್ವದ ೧೩ ನೇ ರಾಷ್ಟ್ರವಾಗಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ೮೯ ನೇ ಅಂತರರಾಷ್ಟ್ರೀಯ ಎಲೆಕ್ಟ್ರೋಟೆಕ್ನಿಕಲ್ ಆಯೋಗದ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ಅವರು, ದೇಶದ ಹಣದುಬ್ಬರ ದರವು ೧೧ ವರ್ಷಗಳಲ್ಲಿ ಅತ್ಯಂತ ಕಡಿಮೆಯಾಗಿದೆ, ದೇಶಾದ್ಯಂತ ೪೭೪ ಕೇಂದ್ರಗಳ ಮೂಲಕ ಅಗತ್ಯ ವಸ್ತುಗಳ ಬೆಲೆಗಳನ್ನು ಮೇಲ್ವಿಚಾರಣೆ ಮಾಡಲಾಗಿದೆ ಎಂದರು. ಈಗ ಸುಮಾರು ೨೪ ಸಾವಿರ ಮಾನದಂಡಗಳನ್ನು ಮೇಲ್ವಿಚಾರಣೆ ಮಾಡುವ ಭಾರತೀಯ ಮಾನದಂಡಗಳ ಬ್ಯೂರೋದ ಬೆಳೆಯುತ್ತಿರುವ ಪಾತ್ರ, ವ್ಯಾಪಕ ಪ್ರಮಾಣೀಕರಣ ವ್ಯಾಪ್ತಿ ಹಾಗೂ ಚಿನ್ನ ಮತ್ತು ಬೆಳ್ಳಿ ಆಭರಣಗಳಿಗೆ ಎಚ್‌ಯುಐಡಿ-ಆಧಾರಿತ ಹಾಲ್‌ಮಾರ್ಕಿಂಗ್ ವ್ಯವಸ್ಥೆಯಂತಹ ಪ್ರಮುಖ ಸುಧಾರಣೆಗಳ ಕುರಿತು ಸಚಿವರು ಮಾತನಾಡಿದರು.

><><><><><

ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಧ್ಯೇಯದೊಂದಿಗೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ದೇಶದಲ್ಲಿ ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿರತವಾಗಿ ಶ್ರಮಿಸುತ್ತಿದೆ.ಈ ಹಿನ್ನೆಲೆಯಲ್ಲಿ ಆಕಾಶವಾಣಿ ಪ್ರಸ್ತುತಪಡಿಸುತ್ತಿರುವ ವಿಶೇಷ ಸರಣಿ - "ಸೇವಾ ಪರ್ವ" ದಲ್ಲಿಂದು, ಕೇಂದ್ರ ಸರ್ಕಾರ, ನವೀಕರಿಸಬಹುದಾದ ಮತ್ತು ಶುದ್ಧ ಇಂಧನ ಕ್ಷೇತ್ರದಲ್ಲಿ ಯಾವ ರೀತಿ ಸಕಾರಾತ್ಮಕ ಪರಿವರ್ತನೆ ತಂದಿದೆ ಎಂಬುವುದರ ಕುರಿತ ಒಂದು ವಿಶೇಷ ವರದಿ ಇಲ್ಲಿದೆ. ಕಳೆದ ದಶಕದಲ್ಲಿ, ಭಾರತದ ಇಂಧನ ಕ್ಷೇತ್ರದ ಪಯಣ ಗಮನಾರ್ಹ ಪರಿವರ್ತನೆಗೆ ಸಾಕ್ಷಿಯಾಗಿದೆ. ತ್ವರಿತ ಸಾಮರ್ಥ್ಯ ವೃದ್ಧಿ, ಸೌರ ಮತ್ತು ಪವನ ಶಕ್ತಿಯಲ್ಲಿ ಜಾಗತಿಕ ಮುದಾಳತ್ವ ಮತ್ತು ನವೀನ ಪ್ರಮುಖ ಕಾರ್ಯಕ್ರಮಗಳೊಂದಿಗೆ, ಭಾರತವು ಶುದ್ಧ, ಸ್ವಾವಲಂಬಿ ಇಂಧನದಿಂದ ನಡೆಸಲ್ಪಡುವ ಭವಿಷ್ಯದತ್ತ ಮುನ್ನಡೆಯುತ್ತಿದೆ. ಶುದ್ಧ ಇಂಧನ, ಇಂಗಾಲದ ಹೊರಸೂಸುವಿಕೆಯನ್ನು ಕಡಿಮೆ ಮಾಡುವುದು ಮಾತ್ರವಲ್ಲದೆ ಹಸಿರು ಉದ್ಯೋಗಗಳನ್ನು ಸೃಷ್ಟಿಸುವುದು ಮತ್ತು ಜಾಗತಿಕ ಹವಾಮಾನ ನಾಯಕನಾಗಿ ಭಾರತದ ಪಾತ್ರವನ್ನು ಬಲಪಡಿಸುತ್ತದೆ. ಕಳೆದ ತಿಂಗಳು ಗುಜರಾತ್‌ನ ಹಂಸಲ್‌ಪುರದಲ್ಲಿ ನಡೆದ ಕಾರ್ಯಕ್ರಮದ ಸಂದರ್ಭದಲ್ಲಿ ಹಸಿರು ಸಂಚಾರ ಉಪಕ್ರಮಗಳನ್ನು ಪ್ರಾರಂಭಿಸುವಾಗ, ಪ್ರಧಾನಿ ನರೇಂದ್ರ ಮೋದಿ ಶುದ್ಧ ಇಂಧನ ಮತ್ತು ಸಂಚಾರ, ಜಾಗತಿಕ ಕೇಂದ್ರವಾಗಿ ಭಾರತದ ಭವಿಷ್ಯವನ್ನು ರೂಪಿಸುತ್ತದೆ ಎಂದು ಒತ್ತಿ ಹೇಳಿದ್ದರು. ಮಾರ್ಚ್ ೨೦೧೪ ರಿಂದ ಜೂನ್ ೨೦೨೫ ರವರೆಗೆ, ನವೀಕರಿಸಬಹುದಾದ ಇಂಧನ ಸಾಮರ್ಥ್ಯವು ಸುಮಾರು ಮೂರು ಪಟ್ಟು ಹೆಚ್ಚಾಗಿ ೨೨೬.೮ ಗಿಗಾವ್ಯಾಟ್‌ಗೆ ತಲುಪಿದೆ. ಪ್ರಸ್ತುತ, ನವೀಕರಿಸಬಹುದಾದ ಮತ್ತು ಪರಮಾಣು ಸೇರಿದಂತೆ ಪಳೆಯುಳಿಕೆಯೇತರ ಇಂಧನ ಮೂಲಗಳು ಭಾರತದ ಒಟ್ಟು ವಿದ್ಯುತ್ ಸಾಮರ್ಥ್ಯದ ಸುಮಾರು ಶೇಕಡಾ ೪೯ ರಷ್ಟು ಕೊಡುಗೆ ನೀಡುತ್ತಿವೆ. ಸೌರ ವಿದ್ಯುತ್ ಉತ್ಪಾದನೆಯು ೧ ಲಕ್ಷ ೮ ಸಾವಿರ ಗಿಗಾವ್ಯಾಟ್‌ಗೂ ಹೆಚ್ಚು ಏರಿಕೆಯಾಗಿದ್ದು, ಭಾರತ ಜಪಾನ್ ಅನ್ನು ಹಿಂದಿಕ್ಕಿ ವಿಶ್ವದ ಮೂರನೇ ಅತಿದೊಡ್ಡ ಸೌರಶಕ್ತಿ ಉತ್ಪಾದಕ ರಾಷ್ಟ್ರವಾಗಿ ಹೊರಹೊಮ್ಮಿದೆ. ಪಿಎಂ-ಕುಸುಮ್ ಯೋಜನೆಯು ಸೌರ ಪಂಪ್‌ಗಳು, ವಿಕೇಂದ್ರೀಕೃತ ಸೌರ ಸ್ಥಾವರಗಳು ಮತ್ತು ಕೃಷಿ ವಲಯದ ಸೌರ ವಿದ್ಯುತ್ ಉಪಯೋಗದ ಮೂಲಕ ರೈತರನ್ನು ಸಬಲೀಕರಣಗೊಳಿಸುತ್ತದೆ. ಪಿಎಂ-ಸೂರ್ಯ ಘರ್ ಯೋಜನೆಯು ೧ ಕೋಟಿ ಮನೆಗಳಿಗೆ ಮೇಲ್ಛಾವಣಿ ಸೌರಶಕ್ತಿಯನ್ನು ಒದಗಿಸುವ ಗುರಿಯನ್ನು ಹೊಂದಿದೆ ಮತ್ತು ೩೦ ಗಿಗಾವ್ಯಾಟ್ ವಸತಿ ಸೌರ ಸಾಮರ್ಥ್ಯವನ್ನು ಉತ್ಪಾದಿಸುವ ಗುರಿ ಹೊಂದಿದೆ. ಸೌರ ಫಲಕ ಮತ್ತು ಪವನ ಶಕ್ತಿ ಯಂತ್ರಗಳ ಹೆಚ್ಚು ಹೆಚ್ಚು ಅಳವಡಿಕೆಯ ಮೂಲಕ ಭಾರತ ಶುದ್ಧ ಮತ್ತು ಹಸಿರು ಭವಿಷ್ಯದತ್ತ ದಾಪುಗಾಲಿಡುತ್ತದೆ.

><><><><><

೨೦೨೫-೨೬ನೇ ಸಾಲಿನ ಮೌಲ್ಯಮಾಪನ ವರ್ಷದ ಆದಾಯ ತೆರಿಗೆ ರಿಟರ್ನ್ಸ್- ಐ ಟಿ ಆರ್ ಸಲ್ಲಿಸುವ ಅಂತಿಮ ದಿನಾಂಕವನ್ನು ಒಂದು ದಿನದ ಮಟ್ಟಿಗೆ ವಿಸ್ತರಿಸಲು ಕೇಂದ್ರೀಯ ನೇರ ತೆರಿಗೆ ಮಂಡಳಿ ನಿರ್ಧರಿಸಿದೆ. ಐ ಟಿ ಆರ್ ಸಲ್ಲಿಸುವ ಅಂತಿಮ ದಿನಾಂಕವನ್ನು ಇಂದಿನವರೆಗೆ ವಿಸ್ತರಿಸಲಾಗಿದೆ. ಆದಾಯ ತೆರಿಗೆ ಇಲಾಖೆ ನಿನ್ನೆ ತಡರಾತ್ರಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಇದನ್ನು ತಿಳಿಸಿದ್ದು, ಮೂಲತಃ ಐ ಟಿ ಆರ್ ಸಲ್ಲಿಸುವ ಅಂತಿಮ ದಿನಾಂಕ ಜುಲೈ ೩೧ ಆಗಿತ್ತು, ನಂತರ ಅದನ್ನು ಸೆಪ್ಟೆಂಬರ್ ೧೫ ರವರೆಗೆ ವಿಸ್ತರಿಸಲಾಗಿತ್ತು. ೨೦೨೫-೨೬ನೇ ಸಾಲಿನ ಮೌಲ್ಯಮಾಪನ ವರ್ಷಕ್ಕೆ ಈಗಾಗಲೇ ೭ ಕೋಟಿಗೂ ಹೆಚ್ಚು ಆದಾಯ ತೆರಿಗೆ ರಿಟರ್ನ್ಸ್ ಸಲ್ಲಿಸಲಾಗಿದೆ ಎಂದು ಆದಾಯ ತೆರಿಗೆ ಇಲಾಖೆ ತಿಳಿಸಿದೆ.

><><><><><

೨೦೨೫ ರ ಕಂಬೈನ್ಡ್ ಗ್ರಾಜುಯೇಟ್ ಲೆವೆಲ್ ಪರೀಕ್ಷೆ- ಸಿ ಜಿ ಎಲ್  ರದ್ದಾಗಿರುವ ಕುರಿತು ಸಾಮಾಜಿಕ ಮಾಧ್ಯಮಗಳಲ್ಲಿ ಹರಡುತ್ತಿರುವ ಊಹಾಪೋಹಗಳ ಬಗ್ಗೆ ಸಿಬ್ಬಂದಿ ಆಯ್ಕೆ ಆಯೋಗ - ಎಸ್ ಎಸ್ ಸಿ ಸ್ಪಷ್ಟನೆ ನೀಡಿದೆ. ಶಾದ್ಯಂತ ನೇಮಕಾತಿ ಪರೀಕ್ಷೆಯು ನಿಗದಿಯಂತೆ ಯಾವುದೇ ಅಡೆತಡೆಯಿಲ್ಲದೆ ಮುಂದುವರೆದಿದೆ ಎಂದು ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆ ಮತ್ತು ಪಿಂಚಣಿ ಸಚಿವಾಲಯ ತಿಳಿಸಿದೆ. ಪರೀಕ್ಷಾ ಪ್ರಕ್ರಿಯೆಯು ನಡೆಯುತ್ತಿದೆ ಎಂದು ಆಯೋಗವು ವಿದ್ಯಾರ್ಥಿಗಳಿಗೆ ಭರವಸೆ ನೀಡಿದೆ. ದೇಶಾದ್ಯಂತ ನಡೆಯುತ್ತಿರುವ ಪರೀಕ್ಷೆಯನ್ನು ಎಲ್ಲಾ ಕೇಂದ್ರಗಳಲ್ಲಿ ಸುಗಮವಾಗಿ ನಡೆಸಲಾಗುತ್ತಿದೆ ಎಂದು ಆಯೋಗವು ತಿಳಿಸಿದೆ.

><><><><><

ಏಷ್ಯಾ ಕಪ್ ಕ್ರಿಕೆಟ್‌ನಲ್ಲಿ ಕಳೆದ ರಾತ್ರಿ ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆದ ಬಿ ಗುಂಪಿನ ಪಂದ್ಯದಲ್ಲಿ ಶ್ರೀಲಂಕಾ ತಂಡ ಹಾಂಕಾಂಗ್ ವಿರುದ್ಧ ೪ ವಿಕೆಟ್‌ಗಳ ಜಯ ಸಾಧಿಸಿದೆ. ಮೊದಲು ಬ್ಯಾಟ್ ಮಾಡಿದ ಹಾಂಕಾಂಗ್ ನಿಗದಿತ ೨೦ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೧೪೯ ರನ್ ಗಳಿಸಿತು. ೧೫೦ ರನ್‌ಗಳ ಗುರಿ ಬೆನ್ನತ್ತಿದ ಶ್ರೀಲಂಕಾ ೧೮.೫ ಓವರ್‌ಗಳಲ್ಲಿ ೬ ವಿಕೆಟ್ ಕಳೆದುಕೊಂಡು ೧೫೩ ರನ್ ಗಳಿಸುವುದರೊಂದಿಗೆ ಗೆಲುವು ಸಾಧಿಸಿತು. ಶೇಖ್ ಝಾಯೇದ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಎ ಗುಂಪಿನ ಇನ್ನೊಂದು ಪಂದ್ಯದಲ್ಲಿ ಯುಎಇ ತಂಡ ಒಮಾನ್ ವಿರುದ್ಧ ೪೨ ರನ್‌ಗಳಿಂದ ಜಯಗಳಿಸಿದೆ. ಮೊದಲು ಬ್ಯಾಟ್ ಮಾಡಿದ ಯುಎಇನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೭೨ ರನ್ ಗಳಿಸಿತು. ಗುರಿ ಬೆನ್ನತ್ತಿದ ಒಮಾನ್ ೧೮.೪ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೧೩೦ ರನ್ ಗಳಿಸಲಷ್ಟೇ ಶಕ್ತವಾಯಿತು.

><><><END><><><